ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2016-17 ದಿನಾಂಕ: 05.08.2017

**ಸುತ್ತೋಲೆ**

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/16-17 ದಿನಾಂಕ:04/04/2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ ಅರ್ಹ ವಿದ್ಯಾರ್ಥಿಗಳ ಮಾಹಿತಿಗಳನ್ನು ಪಡೆಯುವಂತೆ ಉಲ್ಲೇಖ(2)ರ ಈ ಕಛೇರಿಯ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಪ್ರಸ್ತುತ ಟೆಂಡರ್ ಪ್ರಕ್ರಿಯೆಗಳು ಪೂರ್ಣಗೊಂಡಿದ್ದು, ಲ್ಯಾಪ್‌ಟಾಪ್‌ಗಳ ಸರಬರಾಜಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಸರ್ಕಾರದ ವಿವಿಧ ಯೋಜನೆಗಳ ಲಾಭ ಪಡೆಯಲು ಆಧಾರ ನೋಂದಣಿ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಈ ಹಿನ್ನಲೆಯಲ್ಲಿ ಈಗಾಗಲೇ ಲ್ಯಾಪ್‌ಟಾಪ್‌ಗಳನ್ನು ಪಡೆಯಲು ಅರ್ಹರೆಂದು ಗುರುತಿಸಲಾಗಿರುವ ವಿದ್ಯಾರ್ಥಿಗಳ ಆಧಾರ ಸಂಖ್ಯೆಯನ್ನು ಹಾಗೂ ಆಧಾರ ಕಾರ್ಡಿನ ಝೆರಾಕ್ಸ್ ಪ್ರತಿಯನ್ನು ಕೂಡಾ ಪಡೆಯುವಂತೆ ಸೂಚಿಸಲಾಗಿದೆ. ಸದರಿ ಮಾಹಿತಿಗಳೊಂದಿಗೆ ಲ್ಯಾಪ್‌ಟಾಪ್ ಪಡೆಯುತ್ತಿರುವ ಪ್ರತಿ ವಿದ್ಯಾರ್ಥಿಯಿಂದ ಪ್ರತ್ಯೇಕವಾಗಿ ನಿಗದಿತ ನಮೂನೆಯಲ್ಲಿ ವಿವರಗಳನ್ನು ಹಾಗೂ ಅಗತ್ಯ ದಾಖಲಾತಿಗಳನ್ನು ಪಡೆದು ಸಂಗ್ರಹಿಸಿ, ಲ್ಯಾಪ್‌ಟಾಪ್‌ಗಳ ವಿತರಣೆ ಸಮಯದಲ್ಲಿ ಪ್ರತಿ ವಿದ್ಯಾರ್ಥಿಗೆ ವಿತರಿಸುವ ಲ್ಯಾಪ್‌ಟಾಪ್ ಸೀರಿಯಲ್ ಸಂಖ್ಯೆಯನ್ನು ದಾಖಲಿಸಿ, ವಿದ್ಯಾರ್ಥಿಗಳಿಂದ ಸ್ವೀಕೃತಿ ಸಹಿ ಪಡೆದು ಪ್ರಾಂಶುಪಾಲರು ಧೃಢೀಕರಿಸಿ ಸಂಗ್ರಹಿಸಿಟ್ಟುಕೊಳ್ಳುವಂತೆ ಸೂಚಿಸಲಾಗಿದೆ.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

ಅಡಕ: ನಿಗದಿತ ನಮೂನೆ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ
2. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
3. ಲೆಕ್ಕಾಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು- ಮಾಹಿತಿಗಾಗಿ
4. ಕಛೇರಿ ಪ್ರತಿ.

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in

**Government of Karnataka**

## Department of Collegiate Education

Student Information for issue of FREE LAPTOP COMPUTER for SC/ST Students under SCP/TSP Scheme

Passport size Photo

| | | |
|---|---|---|
| 1 | Name of the College: | |
| 2 | Name of the Student | |
| 3 | Gender | Male ☐ Female ☐ |
| 4 | Date of Birth | |
| 5 | Father's Name | |
| 6 | Caste/ Category | SC ☐ ST ☐ |
| 7 | Aadhaar No. *(Supported by Copy of Aadhaar card)* | |
| 8 | Annual Income *(Supported by Income Certificate issued by Tahasildar)* | Less than Rs.2.5 lakh: ☐<br>More than or Equal to Rs.2.5 lakh: ☐ |
| 9 | Percentage of Marks obtained in II PUC or Equivalent Exam *(Supported by Marks card)* | |
| 10 | State in which caste Certificate is issued | Karnataka ☐<br>Outside Karnataka ☐ |
| 11 | Stream | Science: ☐<br>Arts: ☐<br>Commerce: ☐ |
| 12 | Course | Post Graduation: ☐<br>Under Graduation: ☐ |
| 13 | Remarks | |

Signature of the Student

**Office use only**

| | | |
|---|---|---|
| 1 | Laptop Serial Number | |
| 2 | Date of issue of Laptop | |
| 3 | Issued by (Name and Signature of the Staff) | |

**Receipt**

I ______________________ have received the Laptop bearing Serial number ______________________ on Date ______________________ in working condition.

Signature of the Student